ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಪ್ರಾಥಮಿಕ/ಪ್ರೌಢ/ಪದವಿ ಪೂರ್ವ ಶಿಕ್ಷಣ ನೀಡುವ ತಾಲ್ಲೂಕುವಾರು ಶಾಲೆಗಳ ವಿವರ

ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-

754 (995) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಅನುದಾನ ರಹಿತ ಪ್ರಾಥಮಿಕ/ಪ್ರೌಢ/ಪದವಿ ಪೂರ್ವ ಶಿಕ್ಷಣ ನೀಡುವ ಶಾಲೆಗಳು ಎಷ್ಟಿವೆ ; (ವಿವರವಾಗಿ ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನಲೆಯಲ್ಲಿ ಲಾಕ್‌ಡೌನ್ ಸಮಯದಲ್ಲಿ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳ ಸಮಸ್ಯೆಗಳಿಗೆ ಸರ್ಕಾರ ಯಾವ ರೀತಿ ಸ್ಪಂದಿಸಿದೆ ; (ವಿವರವಾದ ಮಾಹಿತಿ ನೀಡುವುದು)

(ಇ) ಅನುದಾನ ರಹಿತ ಶಿಕ್ಷಣ ಸಂಸ್ಥೆಗಳ ನೌಕರರಿಗೆ ಕಳೆದ ಜನವರಿಯಿಂದ ವೇತನ ಪಾವತಿಯಾಗದೆ ಇರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಇತರೆ ಕ್ಷೇತ್ರಕ್ಕೆ ನೀಡಿದಂತೆ ಸರ್ಕಾರವು ಈ ಶಿಕ್ಷಕರಿಗೂ ಪ್ಯಾಕೇಜ್ ನೀಡುವ ಬಗ್ಗೆ ಚಿಂತಿಸಲಾಗಿದೆಯೇ ; ಹಾಗಾದರೆ, ಇಲ್ಲಿಯವರೆಗೂ ನೀಡದಿರಲು ಕಾರಣವೇನು ;

(ಉ) ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ಬಾಕಿ ಇರುವ ಆರ್.ಟಿ.ಇ. ಮರುಪಾವತಿಯನ್ನು ಯಾವಾಗ ಮಾಡಲಾಗುವುದು ; ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ?